# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ

## ಸಿಸಿ ಸಂಖ್ಯೆ: 395/2024

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ಧ**

**ಆರೋಪಿತರು:** 1. ಪಾಪೇಗೌಡ ಡಿ.ಆರ್ ಬಿನ್ ರಾಜೇಗೌಡ
2. ವೇಣುಗೋಪಾಲ ಉ: ವೇಣು ಬಿನ್ ಅಣ್ಣೇಗೌಡ

## ದೋಷಾರೋಪಣೆ

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ 14.02.2024 ರಂದು ಮಧ್ಯಾಹ್ನ 4.00 ರಿಂದ 4.30 ಗಂಟೆಯಲ್ಲಿ ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣಾ ಸರಹದ್ದಿನ ದಿಂಡಗೂರು ಗ್ರಾಮದಲ್ಲಿ ಸಾಕ್ಷಿ. ಮತ್ತು ಸಾಕ್ಷಿ.2 ಇಬ್ಬರು 1 ನೇ ಆರೋಪಿಯಾದ ನಿಮ್ಮನ್ನು ದಾರಿ ಬಿಟ್ಟು ಕೊಡಿ ಎಂದು ಕೇಳಿದಾಗ 1 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಸಾಕ್ಷಿ.2 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ನೀನು ಯಾವನೋ ಬೋಳಿ ಮಗನೇ ನಿನ್ನ ತಾಯಿನಾ ಕ್ಯಾಯ ಕೇಳಲು ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಸಮಯ ಸಂಜೆ 5.00 ಗಂಟೆಯಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ಮತ್ತು 2 ರವರನ್ನು ಪೊಲೀಸ್ ಠಾಣೆಗೆ ದೂರು ನೀಡಲು ಹೊಗುತ್ತಿರುವಾಗ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, ಸಾಕ್ಷಿ.1 ಮತ್ತು 2 ರವರನ್ನು ತಡೆದು ನಿಲ್ಲಿಸಿ,

ಅವರಿಗೆ ಅಕ್ರಮ ತಡೆಯುಂಟುಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 341 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

2) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವಇಚ್ಚೆಯಿಂದ 1 ನೇ ಆರೋಪಿಯಾದ ನೀವು ಸಾಕ್ಷಿ.2 ರವರ ಎಡಕಣ್ಣಿನ ಹತ್ತಿರ ಕಲ್ಲಿನಿಂದ ಹೊಡೆದು, 2 ನೇ ಆರೋಪಿಯಾದ ನೀವು ಸಾಕ್ಷಿ.2 ರವರ ಎದೆಗೆ ಕಲ್ಲಿನಿಂದ ಹೊಡೆದು, 2 ನೇ ಆರೋಪಿಯಾದ ನೀವು ಸಾಕ್ಷಿ.1 ರವರ ತಲೆಗೆ ಕಲ್ಲಿನಿಂದ ಹಾಗೂ ಕಬ್ಬಿಣದ ರಾಡಿನಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 324 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

4) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ 1 ನೇ ಆರೋಪಿಯಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವಇಚ್ಚೆಯಿಂದ ಸಾಕ್ಷಿ.2 ರವರ ಮೈಕೈಗೆ ನಿಮ್ಮ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

5) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ಮತ್ತು 2 ರವರಿಗೆ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **21.08.2025**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.